## ಕರ್ನಾಟಕ ಸರ್ಕಾರ

ಸಂಖ್ಯೆ. ಅಇ 326 ಎಫ್.ಆರ್.ಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ, ಬೆಂಗಳೂರು
ದಿನಾಂಕ. 17-12-2019

## ಸುತ್ತೋಲೆ

ವಿಷಯ:- ಹುದ್ದೆಗಳ ಸೃಜನೆಯ ಅಂಶಗಳನ್ನೊಳಗೊಂಡ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯ ಅನುಮೋದನೆಯನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ.

***************

ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು 1977 ರ ಅನ್ವಯ ಹುದ್ದೆಗಳ ಸೃಜನೆ ಅಥವಾ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸುವ ಅಂಶಗಳನ್ನು ಒಳಗೊಂಡ ಯಾವುದೇ ಪ್ರಸ್ತಾವನೆ / ಯೋಜನೆಗಳನ್ನು ಕುರಿತು ಆದೇಶಗಳನ್ನು ಹೊರಡಿಸುವ ಪೂರ್ವದಲ್ಲಿಯೇ ಆರ್ಥಿಕ ಇಲಾಖೆಯ ಸಹಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ.

ಆದರೆ ಕೆಲವು ಇಲಾಖೆಗಳಲ್ಲಿ ಹುದ್ದೆಗಳ ಸೃಜನೆ ಒಳಗೊಂಡ ಯೋಜನೆಗಳು ಉದಾಹರಣೆಗೆ:- ನರ್ಸಿಂಗ್ ಕಾಲೇಜುಗಳ ಸ್ಥಾಪನೆ, ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ಅವಕಾಶದ ಹೆಚ್ಚುವರಿ ಮುಂತಾದವನ್ನು ಆಡಳಿತ ಇಲಾಖೆಯ ಹಂತದಲ್ಲಿಯೇ ತೀರ್ಮಾನಿಸಿ ಆದೇಶಗಳನ್ನು ಹೊರಡಿಸಿದ ನಂತರ ಹುದ್ದೆಗಳ ಸೃಜನೆಗೆ ಆರ್ಥಿಕ ಇಲಾಖೆಯನ್ನು ಸಂಪರ್ಕಿಸುತ್ತಿರುವುದನ್ನು ಗಮನಿಸಲಾಗಿದೆ..

ಈ ಕ್ರಮವು ನಿಯಮಗಳ ಸ್ಪಷ್ಟ ಉಲ್ಲಂಘನೆಯಾಗುತ್ತದೆ. ಅಲ್ಲದೆ ಇಂತಹ ಕ್ರಮದಿಂದ ಹೆಚ್ಚಿನ ಆರ್ಥಿಕ ಹೊರೆ ಉಂಟಾಗಿ ಅನುದಾನದ ಕೊರತೆಗೆ ಎಡೆಮಾಡಿಕೊಂಡುವುದಲ್ಲದೇ ಆರ್ಥಿಕ ಶಿಸ್ತು ಸಡಿಲಗೊಳ್ಳುತ್ತದೆ. ಜೊತೆಗೆ ಹಲವಾರು ಅನಾವ್ಯಶಕ ಆಡಳಿತ ಸಮಸ್ಯೆಗಳಿಗೆ ಕಾರಣವಾಗುತ್ತದೆ.

ಅದುದರಿಂದ ಇನ್ನು ಮುಂದೆ, ಯಾವುದೇ ಇಲಾಖೆಗಳು, ನಿಗಮ / ಮಂಡಳಿ ಸ್ವಾಯತ್ತ ಸಂಸ್ಥೆ / ಪ್ರಾಧಿಕಾರಗಳು ಹಾಗೂ ಸರ್ಕಾರದ ಸಾಮ್ಯದ ಸಂಸ್ಥೆಗಳು ತಮ್ಮ ಹಂತದಲ್ಲಿಯೇ ಅಂತಿಮ ತೀರ್ಮಾನ ತೆಗೆದುಕೊಳ್ಳದೆ ಹುದ್ದೆಗಳ ಸೃಜನೆ / ಹುದ್ದೆಗಳ ಸಂಖ್ಯೆ ಹೆಚ್ಚಿಸುವ ಪ್ರಸ್ತಾವನೆಗಳ ಬಗ್ಗೆ ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಿ ಇಲಾಖೆಯ ಸಹಮತಿ ಪಡೆದ ನಂತರವೇ ಯೋಜನೆಯ ಅನುಷ್ಠಾನದ ಕುರಿತು ಆದೇಶಗಳನ್ನು ಹೊರಡಿಸಬೇಕೆಂದು ಕೋರಿದೆ.

ಈ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಒಂದು ವೇಳೆ ಈ ಸೂಚನೆಗಳನ್ನು ಉಲ್ಲಂಘಿಸಿ, ಹೊರಡಿಸುವ ಯಾವುದೇ / ಆದೇಶಗಳನ್ನು / ಸೂಚನೆಗಳನ್ನು ಆರ್ಥಿಕ ಇಲಾಖೆಯು ಗಣನೆಗೆ ತೆಗೆದುಕೊಳ್ಳುವುದಿಲ್ಲ ಹಾಗೂ ಈ ಸಂಬಂಧ ಅನುದಾನ ಕಲ್ಪಿಸಲು ಕ್ರಮವಹಿಸುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

(ಐ.ಎಸ್.ಎನ್. ಪ್ರಸಾದ್)
ಅಪರ ಮುಖ್ಯ ಕಾರ್ಯದರ್ಶಿ
ಆರ್ಥಿಕ ಇಲಾಖೆ

**ಇವರಿಗೆ:** ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
**ಪ್ರತಿ:** ಆರ್ಥಿಕ ಇಲಾಖೆಯ ಎಲ್ಲಾ ವಿಶೇಷ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು ಹಾಗೂ ವಿಶೇಷಾಧಿಕಾರಿಗಳು.